ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**
ನೂರ ನಲವತ್ತಮೂರನೆಯ ಅಧಿವೇಶನ
ಗುರುವಾರ, ದಿನಾಂಕ: 4ನೇ ಫೆಬ್ರವರಿ, 2021

ಬಿ.ಡಿ.ಎ. ಜಮೀನು ಮರು ಮಂಜೂರಾತಿಯಲ್ಲಿ ಅಕ್ರಮ

ಶ್ರೀ ಕೆ. ಗೋವಿಂದರಾಜ್ (ವಿಧಾನಸಭೆಯಿಂದ ಚುನಾಯಿತರಾದವರು) :-

352(394) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ 3 ವರ್ಷಗಳ ಅವಧಿಯಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ವಿವಿಧ ಕಾರಣಗಳಿಗಾಗಿ ಮಂಜೂರಾದ/ ಹಂಚಿಕೆಯಾದ ನಿವೇಶನಗಳ ಬದಲಿಯಾಗಿ ವಿವಿಧ ಬಡಾವಣೆಗಳಲ್ಲಿ ಹಂಚಿಕೆ ಮಾಡಿರುವ ನಿವೇಶನಗಳು ಎಷ್ಟು; (ವ್ಯಕ್ತಿ, ಮೊದಲು ಹಂಚಿಕೆಯಾದ ನಿವೇಶನ, ಸ್ಥಳ, ವಿಸ್ತೀರ್ಣ, ಪಾವತಿಸಿಕೊಂಡ ಮೊಬಲಗು, ನಂತರದಲ್ಲಿ ಹಂಚಿಕೆಯಾದ ನಿವೇಶನ, ಸ್ಥಳ, ನಿವೇಶನ ಬದಲಿಗೆ ನೀಡಲಾದ ಕಾರಣ ಇವುಗಳ ಸಂಪೂರ್ಣ ವಿವರಗಳನ್ನು ಪ್ರತ್ಯೇಕವಾಗಿ ಒದಗಿಸುವುದು)

(ಆ) ಬದಲಿ ನಿವೇಶನ/ಜಮೀನು ಹಂಚಿಕೆಗೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ಅನುಸರಿಸುತ್ತಿರುವ ಮಾನದಂಡ ಏನು;

(ಇ) ನಿವೇಶನ/ಜಮೀನು ಬದಲಿ ಹಂಚಿಕೆಯಲ್ಲಿ ವ್ಯಾಪಕ ಭ್ರಷ್ಟಾಚಾರ, ಹಗರಣ ನಡೆದಿರುವುದನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದೆಯೇ; ಹಾಗಿದ್ದಲ್ಲಿ, ಈ ಪ್ರಕರಣದಲ್ಲಿ ಭಾಗಿಯಾಗಿರುವ ವ್ಯಕ್ತಿ, ತಪ್ಪಿತಸ್ಥ ಅಧಿಕಾರಿಗಳ ವಿರುದ್ಧ ಕೈಗೊಂಡ ಕ್ರಮಗಳು ಏನು; (ಪ್ರತ್ಯೇಕವಾದ ಸಂಪೂರ್ಣ ಮಾಹಿತಿಯನ್ನು ಒದಗಿಸುವುದು)

(ಈ) ಬೆಂಗಳೂರು ನಗರದ ಮಡಿವಾಳ ಗ್ರಾಮದ ಸರ್ವೆ ನಂಬರ್ 53ರಲ್ಲಿನ 33 ಗುಂಟೆ ಜಮೀನಿನ ಮರು ಮಂಜೂರಾತಿ ಪ್ರಕ್ರಿಯೆಯಲ್ಲಿ ನಡೆದಿರುವ ಲೋಪ ಮತ್ತು ಇದರಿಂದಾಗಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರಕ್ಕೆ ಆಗಿರುವ ನಷ್ಟದ ಅಂದಾಜು ಸರ್ಕಾರಕ್ಕಿದೆಯೇ; ಹಾಗಿದ್ದಲ್ಲಿ, ಈ ನಿಟ್ಟಿನಲ್ಲಿ ಕೈಗೊಂಡ ಕ್ರಮಗಳೇನು ? (ಸಂಪೂರ್ಣ ವಿವರ ಒದಗಿಸುವುದು)